# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 508 |
| ಉತ್ತರಿಸಬೇಕಾಗಿದ್ದ ದಿನಾಂಕ | : | 24.09.2020 |
| ಉತ್ತರಿಸುವ ಸಚಿವರು | : | ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ನಿರುದ್ಯೋಗಿ ಪದವೀಧರರನ್ನು ಸ್ಟೈಫಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ 1978ರಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ನಿರುದ್ಯೋಗಿ ಪದವೀಧರರನ್ನು ಸ್ಟೈಫಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ 1978ರಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | 1988ರಲ್ಲಿ ಸ್ಟೈಫಂಡರಿ ಪದವೀಧರರಿಗೆ 50% ಮೀಸಲಾತಿ ಕೊಡುವುದಕ್ಕೆ ತೀರ್ಮಾನಿಸಿ ಇಲಾಖೆಗೆ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಂತಹ ನೇಮಕಾತಿಯನ್ನು ಕಾರ್ಮಿಕ ಇಲಾಖೆಯಲ್ಲಿ ಮಾಡಿಕೊಂಡಿರುವುದಿಲ್ಲ. |
| ಇ) | ಸ್ಟೈಫಂಡರಿ ಪದವೀಧರರು 12,13 ವರ್ಷಗಳು ಮಿತ ವೇತನ ಪದವೀಧರರಾಗಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸ್ಟೈಫಂಡರಿ ಪದವೀಧರರು 12, 13 ವರ್ಷಗಳು ಮಿತ ವೇತನ ಪದವೀಧರರಾಗಿ ಇತರೆ ಇಲಾಖೆಗಳಲ್ಲಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಈ) | ಸ್ಟೈಫಂಡರಿ ಪದವೀಧರರು ಹಾಗೂ ದಿನಗೂಲಿ ನೌಕರರ ಅರ್ಹ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ: 02.09.2019ರಲ್ಲಿ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 02.09.2020ರಂದು ನೀಡಿದ ತೀರ್ಪಿನಲ್ಲಿ ಯಾವುದೇ ಅಡ್ಹಾಕ್ ಸೇವೆಯಲ್ಲಿನ ನೌಕರನು ಅಂತೆಯೇ ವಯೋನಿವೃತ್ತಿ ದಿನಾಂಕದವರೆಗೆ ಮುಂದುವರೆದು ಈ ಅವಧಿಯಲ್ಲಿ ಸೇವೆಯಿಂದ ಬಿಡುಗಡೆಗೊಳ್ಳದೆ ಅಥವಾ ಸೇವಾ ಸಕ್ರಮಾತಿ ಪರಿಗಣನೆಯಾಗದೆ ಇರುವ |
| ಉ) | ಬಂದಿದ್ದಲ್ಲಿ, ತೀರ್ಪಿನಲ್ಲಿ ಯಾವ ರೀತಿಯಲ್ಲಿ ನಿವೃತ್ತಿ ನೌಕರರ ಅರ್ಹ ಸೇವೆಯನ್ನು ಪರಿಗಣಿಸಿ ಪಿಂಚಣಿ ನೀಡಬೇಕೆಂದು ಆದೇಶಿಸಿರುತ್ತದೆ; (ವಿವರ ಒದಗಿಸುವುದು) | ಪ್ರಕರಣಗಳಲ್ಲಿ ನಿವೃತ್ತಿ ವೇತನ ಸೌಲಭ್ಯದ ಪರಿಗಣನೆಗೆ ಸಂಬಂಧಿಸಿದೆ. ಆದಾಗ್ಯೂ ಈ ತೀರ್ಪಿನಲ್ಲಿನ ಅಂಶಗಳ ಪರಿಗಣನೆಯು ಕೇವಲ ವರ್ಕ್ ಚಾರ್ಜ್ ಸಿಬ್ಬಂದಿ/ ಪಿಂಚಣಿ ರಹಿತ ಸಾದಿಲ್ವಾರು ವೆಚ್ಚದ ಸಿಬ್ಬಂದಿಗಳಿಗೆ ಸಂಬಂಧಿಸಿದೆ. ಈ ತೀರ್ಪಿನಲ್ಲಿ ಸ್ಟೈಫಂಡರಿ ಪದವೀಧರರು ಹಾಗೂ ದಿನಗೂಲಿ ಮೇಲೆ ನೇಮಕ ಹೊಂದಿ ಸಕ್ರಮಗೊಂಡಿರುವ ನೌಕರರ ಪ್ರಕರಣಗಳನ್ನು ಒಳಪಡಿಸಿಲ್ಲ. |

| | | |
|---|---|---|
| ಊ) | ಮಿತ ವೇತನದಲ್ಲಿ ನಿರ್ವಹಿಸಿರುವ ಸೇವೆಯನ್ನು ಪರಿಗಣಿಸಿ, ಪಿಂಚಣಿ ಸೌಲಭ್ಯ ನೀಡುವಂತೆ ಆದೇಶದಲ್ಲಿ ತಿಳಿಸಿದರೂ ಸಹ ಸರ್ಕಾರದಿಂದ ಯಾವುದೇ ಕ್ರಮ ಆಗದಿರುವುದಕ್ಕೆ ಕಾರಣವೇನು; | ಪ್ರಶ್ನೆ ಉದ್ಭವಿಸುವುದಿಲ್ಲ. |
| ಋ) | ಪ್ರಸ್ತುತ ಯಾವ ರೀತಿ ಅರ್ಹ ಸೇವೆಯನ್ನು ಪರಿಗಣಿಸಲಾಗಿದೆ; (ವಿವರ ಒದಗಿಸುವುದು) | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಈ ಹಿಂದೆ ರಿಟ್ ಅರ್ಜಿ ಸಂಖ್ಯೆ: 1249/89ರಲ್ಲಿ ದಿನಾಂಕ: 26.08.1993ರಂದು ನೀಡಿದ ಆದೇಶದನ್ವಯ ಮಿತವೇತನ ಪದವೀಧರರಾಗಿ ಸಲ್ಲಿಸಿದ ಸೇವೆಯನ್ನು ದಿನಾಂಕ: 01.05.1991ರಿಂದ ಅನ್ವಯಿಸಿ ನಿವೃತ್ತಿ ವೇತನಕ್ಕೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಆದೇಶಿಸಿದ್ದು, ಈ ಮೇರೆಗೆ ಆದೇಶ ಸಂಖ್ಯೆ: ಎಸ್ ಡಬ್ಲ್ಯೂಎಲ್ 18 ಎಲ್ ಇ ಟಿ 94 ದಿನಾಂಕ: 08.01.1998ನ್ನು ಹೊರಡಿಸಲಾಗಿದೆ.<br><br>ಮುಂದುವರೆದು, ಮಾನ್ಯ ನ್ಯಾಯಾಲಯಗಳ ಆದೇಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಇ 09 ಎಸ್ ಆರ್ ಎ 2012 ದಿನಾಂಕ: 08.09.2016 ಮತ್ತು ಸರ್ಕಾರದ ಆದೇಶ ಸಂಖ್ಯೆ: ಆಇ 04 ಎಸ್ ಆರ್ ಎ 2016 ದಿನಾಂಕ: 10.04.2017ರಂತೆ ಪ್ರಾರಂಭದಲ್ಲಿ ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ ತದನಂತರ ಸೇವೆಯಲ್ಲಿ ಕ್ರಮಬದ್ಧಗೊಳಿಸಲಾದ ಎಲ್ಲಾ ಸರ್ಕಾರಿ ನೌಕರರಿಗೆ ಕೆ.ಸಿ.ಎಸ್.ಆರ್. ನಿಯಮ 247–ಎ ರನ್ವಯ ನಿಯಮಾನುಸಾರ ಲಭ್ಯವಾಗುವ ಅಧಿಕ ಅರ್ಹತಾದಾಯಕ ಸೇವಾ ಸೌಲಭ್ಯವನ್ನು ಸಹ ವಿಸ್ತರಿಸಿ ಪರಿಗಣಿಸಲಾಗಿದೆ. |
| ಎ) | ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಯಾವ ಕಾಲಮಿತಿಯೊಳಗೆ ಈ ನಿವೃತ್ತಿ ನೌಕರರಿಗೆ ನ್ಯಾಯ ದೊರಕಿಸಲಾಗುವುದು? | ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಎಲ್‌ಡಿ 128 ಎಲ್‌ಡಬ್ಲ್ಯೂಎ 2020

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ ಹಾಗೂ ಸಕ್ಕರೆ ಸಚಿವರು